**DECEMBER 22,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಕಲಬುರಗಿಯ ಡಾಕ್ಟರ್ ಎಸ್.ಎಂ ಪಂಡಿತ್ ರಂಗಮಂದಿರದ ಎದುರು ನೂತನವಾಗಿ ನಿರ್ಮಿತ, 371 ಹಾಸಿಗೆಗಳ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯನ್ನು, ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನು ಕೆಲವೇ ನಿಮಿಷಗಳಲ್ಲಿ ಲೋಕಾರ್ಪಣೆ ಗೊಳಿಸಲಿದ್ದಾರೆ. ರಾಜ್ಯಸಭಾ ಸದಸ್ಯ ಮಲ್ಲಿಕಾರ್ಜುನ ಖರ್ಗೆ ಅವರು, ಹೊರರೋಗಿ ವಿಭಾಗವನ್ನು, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ಶಸ್ತ್ರ ಚಿಕಿತ್ಸಾ ಘಟಕವನ್ನು ಹಾಗೂ ಕ್ಯಾತ್ ಲಾಬ್ ಸಂಕೀರ್ಣವನ್ನು ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಶರಣಪ್ರಕಾಶ ಪಾಟೀಲ ಉದ್ಘಾಟಿಸಲಿದ್ದಾರೆ.**

<><><>

**ಮಹಾತ್ಮ ಗಾಂಧೀಜಿ ಅವರ ಅಧ್ಯಕ್ಷತೆಯಲ್ಲಿ, 1924 ರಲ್ಲಿ ಬೆಳಗಾವಿಯಲ್ಲಿ ನಡೆದ, ಕಾಂಗ್ರೆಸ್ ಮಹಾಧಿವೇಶನದ ಶತಮಾನೋತ್ಸವ ಸಂಭ್ರಮದ ಹಿನ್ನೆಲೆ, ಇದೇ 26 ಹಾಗೂ 27 ರಂದು, 'ಗಾಂಧಿ ಭಾರತ' ವಿಶೇಷ ಕಾರ್ಯಕ್ರಮ ಆಯೋಜಿತವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ, ಗೃಹ ಕಚೇರಿ ಕೃಷ್ಣದಲ್ಲಿ ಬೆಳಗಾವಿಯಲ್ಲಿ ನಡೆಯಲಿರುವ ಶತಮಾನೋತ್ಸವ ಆಚರಣೆ ಕುರಿತು, ಪೂರ್ವಭಾವಿ ಸಭೆ ಜರುಗಿತು.**

<><><>

**ನಕಲಿ ದಾಖಲೆ ನೀಡಿ, ಕಾರ್ಮಿಕ ಕಾರ್ಡ್ ಪಡೆದಿರುವವರು, ತಮ್ಮ ವ್ಯಾಪ್ತಿಯ ಕಾರ್ಮಿಕ ಕಚೇರಿಗೆ ತೆರಳಿ, ಕಾರ್ಡ್‌ಗಳನ್ನು ಹಿಂದಿರುಗಿಸಿ; ಕಾರ್ಮಿಕ ಮಂಡಳಿಯ ವತಿಯಿಂದ ಕೈಗೊಂಡಿರುವ, ನಕಲಿ ಕಾರ್ಮಿಕ ಕಾರ್ಡ್ ನಿ ೕಧ ಅಭಿಯಾನಕ್ಕೆ ಕೈ ಜೋಡಿಸಿ ಎಂದು, ಕಾರ್ಮಿಕ ಖಾತೆ ಸಚಿವ ಸಂತೋಷ ಲಾಡ ತಿಳಿಸಿದ್ದಾರೆ. ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಂಡಳಿ ಅಧ್ಯಕ್ಷರೂ ಆಗಿರುವ, ಸಂತೋಷ ಲಾಡ, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಮನವಿ ಮಾಡಿದ್ದಾರೆ.**

<><><>

**ಸಂತೋಷ ಲಾಡ ಧ್ವನಿ 16 ಸೆಕೆಂದುಗಳು**

<><><>

**ಕಳೆದ ಮೂರು ವರ್ಷಗಳಲ್ಲಿ 9 ಸಾವಿರದ 871 ಬಾಲಾಪರಾಧ ಪ್ರಕರಣಗಳು ದಾಖಲಾಗಿದ್ದು, ಸಮಾಜವು ದುಸ್ಥಿತಿಗೆ ಹೋಗುತ್ತಿರುವುದರ ಸಂಕೇತವಾಗಿದೆ. ಅಂಕ ಆಧಾರಿತ ಶಿಕ್ಷಣಕ್ಕೆ ಜೋತು ಬಿದ್ದಿರುವ ಶಿಕ್ಷಕರು ಮತ್ತು ಪೋಷಕರು**

ಮಕ್ಕಳಿಗೆ ಜೀವನ ಮೌಲ್ಯ ಕಲಿಸಿ, ಸಂಸ್ಕಾರ ತುಂಬುವ ಕೆಲಸ ಮಾಡಬೇಕು ಎಂದು ಮಕ್ಕಳ ಸಾಹಿತಿ ಟಿ.ಎಸ್ ನಾಗರಾಜಶೆಟ್ಟಿ ಅಭಿಪ್ರಾಯಪಟ್ಟರು. ಮಂಡ್ಯದಲ್ಲಿ ಜರುಗುತ್ತಿರುವ 87 ನೇ ನುಡಿಜಾತ್ರೆಯ, ಸಂಚಿ ಹೊನ್ನಮ್ಮ ಮತ್ತು ಕಾದಂಬರಿ ಸಾಮ್ರಾಜ್ಞಿ ತ್ರಿವೇಣಿ ವೇದಿಕೆಯಲ್ಲಿ ನಡೆದ, 'ಮಕ್ಕಳ ವ್ಯಕ್ತಿತ್ವ ರೂಪಿಸುವಲ್ಲಿ ಸಾಹಿತ್ಯದ ಪಾತ್ರ' ಗೋಷ್ಠಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><><>

ಗಣಿಗಾರಿಕೆಯಿಂದ ಕೆ.ಆರ್.ಎಸ್ ಅಣೆಕಟ್ಟೆಯನ್ನು ರಕ್ಷಿಸಿಕೊಳ್ಳಬೇಕಾಗಿದೆ. ರಾಜ್ಯದ ಪಾಲಿನ ನೀರಿನ ಹಕ್ಕಿಗಾಗಿ ಜಲ ಆಯೋಗ ರಚನೆ ಅನಿವಾರ್ಯವಾಗಿದ್ದು, ನೆಲ–ಜಲದ ಬಗ್ಗೆ ಜನರಲ್ಲಿ ಸಾಕ್ಷರತೆ ಮೂಡಿಸುವುದು ಅಗತ್ಯ ಎಂದು ನೀರಾವರಿ ತಜ್ಞ ಕ್ಯಾಪ್ಟನ್ ರಾಜಾರಾವ್ ಅಭಿಪ್ರಾಯಪಟ್ಟರು. ಮಂಡ್ಯದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಧಾನ ವೇದಿಕೆಯಲ್ಲಿ, 'ನೆಲ–ಜಲ ಸಾಕ್ಷರತೆ; ಅವಲೋಕನ' ಗೋಷ್ಠಿಯಲ್ಲಿ ಅವರು ಮಾತನಾಡಿದರು. ಮಾನವ ನೆಲೆಸುವ ಜಾಗದಲ್ಲಿ ಸಂಸ್ಕೃತಿಗಳು ಹುಟ್ಟುತ್ತಿದ್ದವು. ಆದರೀಗ ಜನಸಂಖ್ಯಾ ಸ್ಫೋಟದಿಂದಾಗಿ ಬರಗಾಲ, ಮರಭೂಮಿ ಹುಟ್ಟುವ ಪರಿಸ್ಥಿತಿ ಬಂದೊದಗಿದೆ. ಮಣ್ಣು ಬರಡಾದರೆ ಕಣ್ಣು ಕುರುಡಾಗುತ್ತದೆ, ಮಣ್ಣೇ ಮಾಣಿಕ್ಯ–ನೀರೇ ಅಮೃತ ಎಂಬ ಮಾತಿದೆ. ಮಕ್ಕಳಿಗೆ ಶಾಲಾ ಹಂತದಲ್ಲಿ ನೆಲ–ಜಲದ ಬಗ್ಗೆ ಅರಿವು ಮೂಡಿಸಬೇಕಿದೆ ಎಂದು ಜಲತಜ್ಞ ಎ.ಬಿ ಪಾಟೀಲ ಹೇಳಿದರು.

<><><>

ಮೂರು ದಿನಗಳ ಕಾಲ ನಡೆದ, ಕನ್ನಡ ನಾಡು–ನುಡಿಯ ಜಾತ್ರೆ, ಇಂದು ಸಂಜೆ ಸಮಾರೋಪಗೊಳ್ಳಲಿದೆ. ಸಂಜೆ 4.30ಕ್ಕೆ, ಪ್ರಧಾನ ವೇದಿಕೆಯಲ್ಲಿ ಹಿರಿಯ ಸಾಹಿತಿ, ಡಾಕ್ಟರ್ ಸಿ.ಪಿ. ಕೃಷ್ಣಕುಮಾರ ಸಮಾರೋಪ ಭಾಷಣ ಮಾಡಲಿದ್ದಾರೆ. ಮುಖ್ಯಮಂತ್ರಿ ಸೇರಿದಂತೆ, ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

<><><>

ತುಮಕೂರಿನಲ್ಲಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ, ಜನವರಿ 18 ಮತ್ತು 19 ರಂದು 39ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಆಯೋಜಿಸಲಿದೆ. ಸಮ್ಮೇಳನದ ಲಾಂಛನವನ್ನು ಗೃಹ ಖಾತೆ ಸಚಿವ ಜಿ.ಪರಮೇಶ್ವರ ಅವರ ಸಮ್ಮುಖದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಗೃಹ ಕಚೇರಿ ಕೃಷ್ಣದಲ್ಲಿ ಬಿಡುಗಡೆ ಮಾಡಿದರು. ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಪಾಲ್ಗೊಂಡಿದ್ದರು.

<><><>

ರಾಜ್ಯದ ವಿವಿಧೆಡೆ ಸಂಭವಿಸಿದ ಪ್ರತ್ಯೇಕ ಅಪಘಾತಗಳಲ್ಲಿ 13 ಮಂದಿ ಸಾವಿಗೀಡಾಗಿದ್ದಾರೆ. ನೆಲಮಂಗಲ ತಾಲೂಕಿನ ರಾಷ್ಟ್ರೀಯ ಹೆದ್ದಾರಿ 48 ರ ಟಿ.ಬೇಗೂರು ಸಮೀಪ ಕಾರಿನ ಮೇಲೆ ಕಂಟೇನರ್ ಪಲ್ಟಿಯಾಗಿ ಚಂದ್ರಮ ಹೆಗಪ್ಪಗೋಳ ಸೇರಿದಂತೆ ಕುಟುಂಬದ 6 ಮಂದಿ ಸ್ಥಳದಲ್ಲೇ ಅಸುನೀಗಿದ್ದಾರೆ.

ಚಂದ್ರಮ ಹಾಗೂ ಕುಟುಂಬ ಮೂಲತಃ ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯ ಜತ್ ತಾಲೂಕಿನ ಮರುಬಿಗಿ ಗ್ರಾಮದವರು. ಇಂದು ಹುಟ್ಟೂರಿನಲ್ಲಿ ಸಾಮೂಹಿಕ ಅಂತ್ಯಸಂಸ್ಕಾರ ಜರುಗಿತು.

<><><>

ದಾವಣಗೆರೆಯಲ್ಲಿ ಸಿರಿಧಾನ್ಯಗಳ ಮಾರಾಟ ಮತ್ತು ಖಾದ್ಯಗಳ ಸೂಪರ್ ಮಾರುಕಟ್ಟೆ ನಿರ್ಮಿಸಲಾಗುವುದು ಎಂದು ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಸುರೇಶ ಇಟ್ನಾಳ ತಿಳಿಸಿದ್ದಾರೆ. ಸಿರಿಧಾನ್ಯ ಖಾದ್ಯ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಅವರು,

ಅಂತಾರಾಷ್ಟ್ರೀಯ ಸಿರಿಧಾನ್ಯ ವರ್ಷಾಚರಣೆ ಅಂಗವಾಗಿ, ಸಿರಿಧಾನ್ಯ ಬೆಳೆಯಲು ಮತ್ತು ಮೌಲ್ಯವರ್ಧಿತ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲು, ಮಹಿಳಾ ಸ್ವ ಸಹಾಯ ಸಂಘಗಳಿಗೆ ಉತ್ತೇಜನ ನೀಡಲಾಗುತ್ತಿದೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..